# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿಬಿಎಂಪಿ/ಯವ/ಕೊಉ/ಪಿಆರ್/03/2020-21

ಸಹಾಯಕ ಅಭಿಯಂತರರ ಕಛೇರಿ
ಕೊಡಿಗೇಹಳ್ಳಿ ಉಪವಿಭಾಗ, ಯಲಹಂಕ ವಲಯ
9ನೇ ಅಡ್ಡರಸ್ತೆ, ಡಿ ಬ್ಲಾಕ್
ಸಹಕಾರನಗರ, ಬೆಂಗಳೂರು 560092
ದಿನಾಂಕ: 23.03.2021

**ದಿನಾಂಕ: 23.03.2021 ರಂದು ವಾರ್ಡ್ ಸಮಿತಿಯ ಸಭೆಯ ನಡವಳಿಗಳು:-**

**ಸಭೆಗೆ ಹಾಜರಿದ್ದವರು:**

- ಶ್ರೀ ಗುರು, ಕಾರ್ಯಪಾಲಕ ಅಭಿಯಂತರರು, ನೋಡೆಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ವಾರ್ಡ್ ಸಮಿತಿ.
- ಶ್ರೀ ಪ್ರವೀಣ್ ಎ.ಆರ್., ಕಿರಿಯ ಅಭಿಯಂತರರು ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿ
- ಶ್ರೀಮತಿ. ಕವಿತಾ, ಕಿರಿಯ ಆರೋಗ್ಯ ಪರಿವೀಕ್ಷಕರು, ಘನ ತ್ಯಾಜ್ಯ
- ಶ್ರೀ. ಮಂಜುನಾಥ್, ಹಿರಿಯ ಆರೋಗ್ಯ ಪರಿವೀಕ್ಷಕರು, ಅರೋಗ್ಯ
- ಶ್ರೀ. ಡಾ॥ ಪ್ರೇಮಾನಂದ್, ಆರೋಗ್ಯ ವೈದ್ಯಾಧಿಕಾರಿ, ಪ್ರಾಥಮಿಕ ಆರೋಗ್ಯ ಕೇಂದ್ರ, ಕೊಡಿಗೇಹಳ್ಳಿ.
- ಶ್ರೀ. ಬಸವರಾಜ್, ಕಂದಾಯ ನಿರೀಕ್ಷಕರು, ವಾರ್ಡ್ ಸಂಖ್ಯೆ:08 ಕೊಡಿಗೇಹಳ್ಳಿ

ವಾರ್ಡ್ ಸಮಿತಿ ಸದಸ್ಯರು

- ಶ್ರೀ. ಅಂತೋನಿ ದಾಸ್, ವಸತಿ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು
- ಶ್ರೀ ಶ್ರೀಕಾಂತ್, ಆಮ್ಕೋ ಬಡಾವಣೆ, ಸದಸ್ಯರು
- ಶ್ರೀ ವೆಂಕಟಸ್ವಾಮಿ, ದೇವಿನಗರ, ಸದಸ್ಯರು
- ಮುನಿಸ್ವಾಮಿ ನಾಯ್ಡು, ದೇವಿನಗರ, ಸದಸ್ಯರು
- ಶಬರಿ, ಅರವಿಂದ ಆರ್ಕಿಡ್ ಅಪಾರ್ಟ್‌ಮೆಂಟ್ ವಸತಿ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು

ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ಸಮಿತಿ ಕಾಯದರ್ಶಿಗಳಾದ ಶ್ರೀ. ಪ್ರವೀಣ್ ಎ.ಆರ್. ರವರು ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್ ಸಮಿತಿಯ ಸದಸ್ಯರುಗಳು ಹಾಗೂ ಎಲ್ಲಾ ವೃಂದದ ಅಧಿಕಾರಿಗಳನ್ನು ಸ್ವಾಗತಿಸುತ್ತಾ ಸಭೆಯನ್ನು ಪ್ರಾರಂಭಿಸಲಾಯಿತು ಹಾಗೂ ಈ ಹಿಂದಿನ ಸಭೆಯಲ್ಲಿ ಚರ್ಚಿಸಿದ ಸಮಸ್ಯೆಗಳನ್ನು ಪರಿಹರಿಸಲಾಗಿದೆ ಎಂದು ಸಭೆಗೆ ತಿಳಿಸಿದರು.

ಶ್ರೀ ಗುರು, ಕಾ.ಪಾ.ಅ ಹಾಗೂ ನೋಡಲ್ ಅಧಿಕಾರಿ ರವರು ಮಾತನಾಡುತ್ತ, ಹಿಂದಿನ ಸಭೆಯ ನಡುವಳಿಗಳ ಬಗ್ಗೆ ಓದಿ ಚರ್ಚಿಸಿ, ಸಮಸ್ಯೆಗಳನ್ನು ಬಗೆಹರಿಸಿರುವ ಕುರಿತು ಹಾಜರಿದ್ದ ಅಧಿಕಾರಿಗಳಿಗೆ ಮತ್ತು ವಸತಿ ಕ್ಷೇಮಾಭಿವೃಧಿ ಸಂಘದ ಸದಸ್ಯರುಗಳ ಜೊತೆಗೆ ಚರ್ಚಿಸಿದರು. ನಂತರ ಹಾಜರಿದ್ದ ಅಧಿಕಾರಿಗಳು ಸಮಸ್ಯೆಗಳನ್ನು ಬಗೆಹರಿಸಿರುವುದಾಗಿ ಸಭೆಗೆ ತಿಳಿಸಿದರು.

ಶ್ರೀ ವೆಂಕಟಸ್ವಾಮಿ, ದೇವಿನಗರ, ಸದಸ್ಯರು ಮಾತನಾಡಿ, ಒಂದು ತಿಂಗಳಿನಿಂದ ನೀರಿನ ಸಮಸ್ಯೆ ಕಾಡುತ್ತಿದ್ದು, ಸರಿಯಾದ ಸಮಯಕ್ಕೆ ನೀರು ಪೂರೈಕೆ ಆಗುತ್ತಿಲ್ಲ, ಇದರಿಂದ ಸಾರ್ವಜನಿಕರಿಗೆ ತೊಂದರೆ ಉಂಟಾಗಿದೆ ಎಂದು ತಿಳಿಸುತ್ತ ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರು ಸಮಸ್ಯೆ ಬಗೆಹರಿಸಿರುವುದಿಲ್ಲ. ಅದನ್ನು ಸರಿಪಡಿಸಿ ಕೊಡಲು ಸಭೆಗೆ ಮನವಿ ಮಾಡಿದರು.

ಮುನಿಸ್ವಾಮಿ ನಾಯ್ಡು, ದೇವಿನಗರ, ಸದಸ್ಯರು ಮಾತನಾಡಿ, ಸದರಿ ಬಡಾವಣೆಯಲ್ಲಿ ಕಾವೇರಿ ನೀರಿನ ಜೊತೆಯಲ್ಲಿ ಚರಂಡಿ ನೀರು ಮಿಶ್ರಣವಾಗಿ ಕಲುಷಿತ ನೀರು ಮನೆಗಳಿಗೆ ಸರಬರಾಜು ಆಗುತ್ತಿರುವುದು ಕಂಡುಬಂದಿರುತ್ತದೆ ಹಾಗೂ ಕಾವೇರಿ ನೀರು ಸಹ ಸಮರ್ಪಕವಾಗಿ ಪೂರೈಕೆ ಆಗುತ್ತಿಲ್ಲವೆಂದು ಸಭೆಗೆ ತಿಳಿಸಿದರು.

ಈ ಕುರಿತು ನೋಡೆಲ್ ಅಧಿಕಾರಿ ರವರು ಶ್ರೀಮತಿ. ಚಿಂತನ, ಸಹಾಯಕ ಅಭಿಯಂತರರು (ಬೆಂಗಳೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ) (BWSSB) ರವರಿಗೆ ದೂರವಾಣಿ ಮೂಲಕ ಕರೆ ಮಾಡಿ ಮಾತನಾಡಿ, ಸದರಿ ಸಮಸ್ಯೆ ಬಗ್ಗೆ ತಿಳಿಸಿ ಸ್ಥಳ ಪರಿಶೀಲನೆ ಮಾಡಿ ವರದಿ ನೀಡುವಂತೆ ಸೂಚಿಸಿದರು ಹಾಗೂ ನೀರಿನ ಸಮಸ್ಯೆಯನ್ನು ಆದಷ್ಟು ಬೇಗ ಸರಿಪಡಿಸಿ ಸಮಸ್ಯೆಯನ್ನು ಬಗೆಹರಿಸುತ್ತೇವೆಂದು ತಿಳಿಸಿದರು.

ಶಬರಿ, ಅರವಿಂದ ಆರ್ಕಿಡ್ ಅಪಾರ್ಟ್‌ಮೆಂಟ್ ವಸತಿ ಕ್ಷೇಮಾಭಿವೃದ್ದಿ ಸಂಘದ ಸದಸ್ಯರು ಮಾತನಾಡಿ, ಸದರಿ ಅಪಾರ್ಟ್‌ಮೆಂಟ್ ಪಕ್ಕದಲ್ಲಿರುವ ಸರ್ಕಾರದ ಜಾಗದಲ್ಲಿ ಕಸವನ್ನು ಹಾಕುತ್ತಿರುತ್ತಾರೆ ಹಾಗೂ ಮರ ಗಿಡಗಳಿಂದ ಎಲೆಗಳು ಉದುರುತ್ತಿರುತ್ತವೆ. ಆದ್ದರಿಂದ ಸೊಳ್ಳೆ ಸಮಸ್ಯೆ ಉಂಟಾಗಿರುತ್ತದೆ. ಅದರಿಂದ ನಿವಾಸಿಗಳಿಗೆ ತೊಂದರೆ ಉಂಟಾಗಿರುವುದಾಗಿ ಸಭೆಗೆ ತಿಳಿಸಿದರು.

ಈ ಕುರಿತು ನೋಡಲ್ ಅಧಿಕಾರಿಗಳು ಮಾತನಾಡಿ ಸಮಸ್ಯೆಯನ್ನು ತ್ವರಿತವಾಗಿ ಬಗೆಹರಿಸಲು ಸೂಚಿಸುತ್ತ ವಾರ್ಡ್‌ನ ಕಿರಿಯ ಅಭಿಯಂತರರಿಗೆ ಸ್ಥಳದ ಕುರಿತು ವಿಚಾರಿಸಿದರು ಅದಕ್ಕೆ ಪೂರಕವಾಗಿ ಶ್ರೀ ಪವ್ರೀಣ್ ರವರು ಸದರಿ ಸ್ಥಳದಲ್ಲಿ ಉಚ್ಚ ನ್ಯಾಯಾಲಯದಲ್ಲಿ ತಕರಾರು ಅರ್ಜಿ

ಸಲ್ಲಿಸಿದ್ದು, ನ್ಯಾಯಾಲಯದ ತೀರ್ಪು ಬಂದ ನಂತರ ಸಾರ್ವಜನಿಕ ಆಸ್ತಿಪಾಸ್ತಿಗಳನ್ನು ರಕ್ಷಿಸಲು ಫೆನ್ಸಿಂಗ್, ಕಾಂಪೌಡ್ ಹಾಗೂ ಸೂಕ್ತ ಕ್ರಮಗಳನ್ನು ಕೈಗೊಳ್ಳುವುದಾಗಿ ಹೇಳಿದರು.

ಶ್ರೀ. ಅಂತೋನಿ ದಾಸ್, ಸಹಾಕಾರನಗರ ವಸತಿ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು ಮಾತನಾಡಿ ಸಹಕಾರನಗರದಲ್ಲಿ ಸರ್ಕಾರಿ ಜಾಗವು ಒತ್ತುವರಿಯಾಗಿರುವುದು ಕಂಡಿಬಂದಿರುತ್ತದೆ. ಐದು ಉದ್ಯಾನವನಗಳ ಜಾಗಗಳಿಗೆ ಖಾತಾ ಪ್ರಮಾಣ ಪತ್ರ ಮಾಡಿಸಿಕೊಡಿರುತ್ತಾರೆ ಎಂದು ಸಭೆಗೆ ತಿಳಿಸುತ್ತ, ಸಮಸ್ಯೆಯನ್ನು ಬಗ್ಗೆಹರಿಸಲು ಸಭೆಗೆ ಕೋರಿದರು ಹಾಗೂ ಸದರಿ ವಾಡ್‌ನ ಎಲ್ಲಾ ರಸ್ತೆಗಳಲ್ಲಿ ರಸ್ತೆ ಅಗೆತ ಕಂಡುಬಂದಿದ್ದು, ಅಕ್ರಮವಾಗಿ ರಸ್ತೆ ಅಗೆಯುತ್ತಿರುವವರ ವಿರುದ್ಧ ಕ್ರಮ ಕೈಗುಳ್ಳುವಂತೆ ಇದರಿಂದ ಸಾರ್ವಜನಿಕರಿಗೆ ಬಹಳ ಸಮಸ್ಯೆ ಆಗುತ್ತಿದೆ ಎಂದು ಸಭೆಗೆ ತಿಳಿಸಿದರು.

ಶ್ರೀ ಪ್ರವೀಣ್ ಎ.ಆರ್., ಕಿರಿಯ ಅಭಿಯಂತರರು ಮಾತನಾಡಿ ಜಂಟಿ ಆಯುಕ್ತರು (ಯಲಹಂಕ ವಲಯ) ರವರಿಂದ ಬಿಡಿಎ ರವರಿಗೆ ಪಾರ್ಕ್‌ಗಳನ್ನು ಗುರುತಿಸಿ ಕೊಡಬೇಕೆಂದು ಪತ್ರ ಬರೆಯಲಾಗಿದ್ದು ಹಾಗೂ ಸದರಿ ಪ್ರಕರಣವು ಉಚ್ಚ ನ್ಯಾಯಲಯದಲ್ಲೆ ದಾವೆ ಇರುವುದಾಗಿ ತಿಳಿಸುತ್ತಾ, ನ್ಯಾಯಾಲಯದ ತಿರ್ಪಿನ ನಂತರ ಸಮಸ್ಯೆ ಬಗೆಹರಿಸಲಾಗುವುದೆಂದು ಸಭೆಗೆ ತಿಳಿಸಿದರು. ಮುಂದುವರೆದಂತೆ ರಸ್ತೆ ಅಗೆಯುತ್ತಿರುವವರು ಬಿಬಿಎಂಪಿಯಿಂದ ಅನುಮತಿ ಪಡೆದಿದ್ದಾರೆ ಎಂದು ಸಭೆಗೆ ತಿಳಿಸಿದರು.

ನೋಡೆಲ್ ಅಧಿಕಾರಿಗಳು ಮಾತನಾಡಿ ^(ವಾರ್ಡ್‌ನ ಎಲ್ಲಾ ಕಡೆ) ರಸ್ತೆ ಅಗೆತಗಳನ್ನು ಪರಿಶೀಲಿಸಿ ವರದಿಯನ್ನು ಕೊಡಲು ಕಿರಿಯ ಅಭಿಯಂತರರವರಿಗೆ ಸೂಚಿಸಿದರು ಹಾಗೂ ಸಭೆಯಲ್ಲಿರುವ ಎಲ್ಲಾ ಆರ್‌ಡಬ್ಲ್ಯೂಎ ರವರ ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್ ಟೆಸ್ಟ್ ಸಮರ್ಪಕವಾಗಿ ಮಾಡುವುದರಿಂದ ಸಾಂಕ್ರಮಿಕ ರೋಗವನ್ನು ಪತ್ತೆ ಹಚ್ಚಲು ಸಹಾಯಕವಾಗುವುದು ಎಂದು ತಿಳಿಸಿದರು.

ಆರೋಗ್ಯ ಇಲಾಖೆಯ ಡಾಕ್ಟರ್ ಪ್ರೇಮಾನಂದ್ ರವರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ವಸತಿ ಸಮುಚ್ಚಯರವರು ಇದುವರೆಗೂ ಕೋವಿಡ್ ಟೆಸ್ಟ್‌ಗೆ ಸಹಕಾರ ನೀಡುತ್ತಿಲ್ಲ ಎಂದು ತಿಳಿಸಿ ವಾರ್ಡ್ ವ್ಯಾಪ್ತಿಯಲ್ಲಿ ಹೆಚ್ಚು ಟೆಸ್ಟ್ ಮಾಡುವುದರಿಂದ ಪ್ರಕರಣ ಪತ್ತೆ ಹಚ್ಚಿ ಸಮಸ್ಯೆ ಬಗೆಹರಿಸಲು ಸಹಕಾರವಾಗುತ್ತದೆ ಎಂದು ಸಭೆಗೆ ತಿಳಿಸಿದರು. ಕೊಡಿಗೇಹಳ್ಳಿ ವಾರ್ಡ್ ಸಂಖ್ಯೆ:08ರ ವ್ಯಾಪ್ತಿಯಲ್ಲಿ 5 ಟೀಮ್‌ಗಳಿದ್ದು, ಕೋವಿಡ್ ಟೆಸ್ಟ್ ಸಲುವಾಗಿ ಸಾರ್ವಜನಿಕರಲ್ಲಿ ಮನವಿ ಮಾಡುವಂತೆ ಆರ್‌ಡಬ್ಲ್ಯೂಎ ರವರುಗಳಲ್ಲಿ ಮನವಿ ಮಾಡಿದರು.

C

ಈ ಕುರಿತು ನೋಡೆಲ್ ಅಧಿಕಾರಿಗಳು ಮಾತನಾಡಿ ಕೋವಿಡ್-19 ಈ ರೋಗವನ್ನು ತಡೆಗಟ್ಟಲು ರೋಗ ಹರಡುವಿಕೆಯ ಸರಪಳಿಯನ್ನು ತಡೆಯಲು ಸೋಂಕಿತರನ್ನು ಅತೀ ಬೇಗನೆ ಪತ್ತೆ ಮಾಡಲು ಪರೀಕ್ಷೆಗಳನ್ನು ನಡೆಸುವುದು ಅತ್ಯವಶ್ಯಕವಾಗಿರುವುದರಿಂದ ವಾರ್ಡ್ ಸಂಖ್ಯೆ:08 ರ ಎಲ್ಲಾ ಆರ್‌ಡಬ್ಲ್ಯೂಎ ರವರುಗಳು ಸ್ವಯಂ ಪ್ರೇರಿತರಾಗಿ ತಮ್ಮ ಅಪಾರ್ಟ್‌ಮೆಂಟ್, ವಾಸಿಸುವ ಸ್ಥಳಗಳಲ್ಲಿ ಬಡಾವಣೆಗಳಲ್ಲಿ ಸುತ್ತಮುತ್ತಲಿನ ಜನರನ್ನು ಪರೀಕ್ಷೆ ಒಳಪಡಲು ಸೂಕ್ತವಾದ ತಿಳುವಳಿಕೆಯನ್ನು ನೀಡಿ ಹೆಚ್ಚು ಪರೀಕ್ಷೆಗಳನ್ನು ನಡೆಸಲು ಸಹಕಾರವನ್ನು ನೀಡುವಂತೆ ಕೋರಿದರು.

ಅಂತಿಮವಾಗಿ ಶ್ರೀ ಗುರು, ನೋಡಲ್ ಅಧಿಕಾರಿಯವರು ಈ ಮೇಲ್ಕಂಡ ಅಂಶಗಳ ಬಗ್ಗೆ ವಿವರವಾಗಿ ಅಧಿಕಾರಿಗಳಿಗೆ ನಿರ್ದೇಶನ ನೀಡಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸೂಚಿಸಿದರು ನಂತರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯ ಗೊಳಿಸಲಾಯಿತು.

(ಶ್ರೀ ಗುರು)
ಕಾರ್ಯಪಾಲಕ ಅಭಿಯಂತರರು ಹಾಗೂ
ವಾರ್ಡ್ ಸಮಿತಿ ಅಧ್ಯಕ್ಷರು
ವಾರ್ಡ್ ಸಂಖ್ಯೆ:08

(ಪ್ರವೀಣ್ ಎ.ಆರ್.)
ಕಾರ್ಯದರ್ಶಿಗಳು ಮತ್ತು
ಕಿರಿಯ ಅಭಿಯಂತರರು
ವಾರ್ಡ್ 8, ಕೊಡಿಗೇಹಳ್ಳಿ ಉಪ

<u>ಪ್ರತಿಯನ್ನು:-</u>

1. ಮಾನ್ಯ ಆಡಳಿತ ಅಧಿಕಾರಿಗಳು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಮಾನ್ಯ ಜಂಟಿ ಆಯುಕ್ತರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಆರೋಗ್ಯಾಧಿಕಾರಿಗಳು, ಯಲಹಂಕ ವಲಯ, ಬಿಬಿಎಂಪಿ ರವರ ಮಾಹಿತಿಗಾಗಿ ಕಳುಹಿಸಿದೆ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹ`ತ್ ನೀರುಗಾಲುವೆ ರವರ ಮಾಹಿತಿಗಾಗಿ ಕಳುಹಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೊಡಿಗೇಹಳ್ಳಿ ಉಪವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಕಳುಹಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಕಳುಹಿಸಿದೆ.
9. ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ರವರ ಮಾಹಿತಿಗಾಗಿ ಕಳುಹಿಸಿದೆ.
10. ವಾರ್ಡ್ ಕಮಿಟಿ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
11. ಕಛೇರಿ ಕಡತಕ್ಕೆ.